# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 463
2) ಸದಸ್ಯರ ಹೆಸರು : ಶ್ರೀ ಬಿ.ಕೆ ಹರಿಪ್ರಸಾದ್
3) ಉತ್ತರಿಸಬೇಕಾದ ದಿನಾಂಕ: : 15.09.2021
4) ಉತ್ತರಿಸುವವರು : ಮಾನ್ಯ ಸಚಿವರು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ತಾಳಗುಪ್ಪ-ಹೊನ್ನಾವರ ರೈಲ್ವೆ ಮಾರ್ಗ ಜೋಡಣೆ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ರಾಜ್ಯ ಮತ್ತು ಕೇಂದ್ರ ಸರ್ಕಾರಗಳು 50%:50% ಅನುದಾನದಡಿ ನಿರ್ಮಿಸುವ ಪ್ರಸ್ತಾವನೆ ಇದೆಯೇ: (ಮಾಹಿತಿ ಒದಗಿಸುವುದು) | ತಾಳಗುಪ್ಪ-ಹೊನ್ನಾವರ ನೂತನ ರೈಲ್ವೆ ಮಾರ್ಗ ನಿರ್ಮಾಣಕ್ಕಾಗಿ ರಾಜ್ಯ ಸರ್ಕಾರದಿಂದ ವೆಚ್ಚ ಹಂಚಿಕೆ ಮಾಡಿಕೊಳ್ಳುವಂತೆ ಕೋರಿ ರೈಲ್ವೆ ಇಲಾಖೆಯಿಂದ ಯಾವುದೇ ಪ್ರಸ್ತಾವನೆಯು ಸ್ವೀಕೃತವಾಗಿರುವುದಿಲ್ಲ.<br><br>ಆದರೆ, ರೈಲ್ವೆ ಇಲಾಖೆಯಿಂದ ಪಡೆದ ಮಾಹಿತಿಯ ಅನುಸಾರ 82 ಕಿ.ಮೀ ಉದ್ದದ ಈ ರೈಲು ಮಾರ್ಗ ಯೋಜನೆಯ Preliminary Engineering cum Traffic Survey ಕಾರ್ಯವನ್ನು 2010ರಲ್ಲಿ ನೈರುತ್ಯ ರೈಲ್ವೆಯು ಪೂರ್ಣಗೊಳಿಸಿ ಯೋಜನೆಯನ್ನು ಮಂಜೂರು ಮಾಡಲು ರೈಲ್ವೆ ಮಂಡಳಿಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ.<br><br>ಆದರೆ, ಈವರೆವಿಗೆ ಈ ಯೋಜನೆಯನ್ನು ರೈಲ್ವೆ ಮಂಡಳಿಯು ಮಂಜೂರು ಮಾಡಿರುವುದಿಲ್ಲ.<br><br>ರೈಲ್ವೆ ಇಲಾಖೆಯಿಂದ ಈ ಯೋಜನೆಯ ವೆಚ್ಚ ಹಂಚಿಕೆಗಾಗಿ ರಾಜ್ಯ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಕೆಯಾದಲ್ಲಿ ವೆಚ್ಚ ಹಂಚಿಕೆಯ ಕುರಿತಂತೆ ಪರಿಶೀಲಿಸಲಾಗುವುದು. |
| ಆ) | ಸದರಿ ಪ್ರಸ್ತಾವನೆಯು ಕಾರ್ಯಗತಗೊಂಡಲ್ಲಿ ಕರಾವಳಿ ಭಾಗಕ್ಕೆ ಶೀಘ್ರ ಸಂಚಾರ ಸಾರಿಗೆ ಮತ್ತು ವಾಣಿಜ್ಯ ಅಭಿವೃದ್ಧಿ ದೃಷ್ಟಿಯಿಂದ ಅತ್ಯಂತ ಸೂಕ್ತವಾಗಿದ್ದು, ಸದರಿ ಪ್ರಸ್ತಾವನೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ: ಹಾಗೂ ಯಾವ ಕಾಲಮಿತಿಯಲ್ಲಿ ಯೋಜನೆ ಪೂರ್ಣಗೊಳಿಸಲು ಸಂಬಂಧಪಟ್ಟ ಇಲಾಖೆಗಳ ಅನುಮತಿ ಪಡೆಯುವ ಕಾರ್ಯ ಪ್ರವೃತ್ತಿ ಕೈಗೊಂಡಿದೆ: (ಸಂಪೂರ್ಣ ಮಾಹಿತಿ ಒದಗಿಸುವುದು) | |
| ಇ) | ಸದರಿ ಯೋಜನೆಗೆ ರಾಜ್ಯ ಸರ್ಕಾರ ಎಷ್ಟು ಹಣ ಮೀಸಲಿಟ್ಟಿದೆ? (ಇಟ್ಟಿದ್ದಲ್ಲಿ, ಎಷ್ಟು ಹಣ ಮೀಸಲಿಡಲಾಗಿದೆ) (ಸಂಪೂರ್ಣ ಮಾಹಿತಿ ಒದಗಿಸುವುದು) | |

ಮೂಅಇ 152 ರಾರಾಹೆ 2021/ಇ

**(ವಿ.ಸೋಮಣ್ಣ)**
ವಸತಿ ಮತ್ತು ಮೂಲಸೌಲಭ್ಯ
ಅಭಿವೃದ್ಧಿ ಸಚಿವರು